ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: M/s Lalpur Wind Energy Private Limited ಕಂಪನಿಗೆ ಬಳ್ಳಾರಿ ಮತ್ತು ದಾವಣಗೆರೆ ಜಿಲ್ಲೆಗಳ ಕೂಡ್ಲಿಗಿ ಮತ್ತು ಜಗಳೂರು ತಾಲ್ಲೂಕುಗಳ ವಿವಿಧ ಗ್ರಾಮಗಳಲ್ಲಿ 15.20 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡುವ ಬಗ್ಗೆ.

ಓದಲಾಗಿದೆ: 1. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು ಇವರ ಏಕ ಕಡತ ಸಂಖ್ಯೆ:KREDL/08/LWEPL- 15.20 MW/Kudligi & Jagalur/2017/L-1472

MD KREDL

* * *

ಪ್ರಸ್ತಾವನೆ :-

GM (Tech) I/C

M/s Lalpur Wind Energy Private limited ಕಂಪನಿಯು ಬಳ್ಳಾರಿ ಮತ್ತು ದಾವಣಗೆರೆ ಜಿಲ್ಲೆಗಳ ಕೂಡ್ಲಿಗಿ ಮತ್ತು ಜಗಳೂರು ತಾಲ್ಲೂಕುಗಳ ವಿವಿಧ ಗ್ರಾಮಗಳಲ್ಲಿ 15.20 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಹಂಚಿಕೆ ಕೋರಿ ಸಲ್ಲಿಸಿರುವ ಪ್ರಸ್ತಾವನೆಯನ್ನು ಪರಿಶೀಲಿಸಿ, ಇದನ್ನು ಹಂಚಿಕೆ ಸಮಿತಿ ಸಭೆಯ ಮುಂದೆ ಮಂಡಿಸುವ ಸಲುವಾಗಿ ಯೋಜನೆಗೆ ಸಂಬಂಧಿಸಿದ ತಾಂತ್ರಿಕ ವಿವರಗಳು, ಸ್ಥಳದ ಮಾಹಿತಿ, ಅಕ್ಷಾಂಶ ಮತ್ತು ರೇಖಾಂಶ ಹಾಗೂ ಇನ್ನಿತರೆ ವಿವರಗಳೊಂದಿಗೆ ವ್ಯವಸ್ಥಾಪಕ ನಿರ್ದೇಶಕರು, ಕೆ.ಆರ್.ಇ.ಡಿ.ಎಲ್. ರವರು ಮೇಲೆ ಓದಲಾದ ಕ್ರಮ ಸಂಖ್ಯೆ (1) ರನ್ವಯ ಏಕ ಕಡತ ಪದ್ಧತಿಯಡಿ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, M/s Lalpur Wind Energy Private Limited ಕಂಪನಿಗೆ ಬಳ್ಳಾರಿ ಮತ್ತು ದಾವಣಗೆರೆ ಜಿಲ್ಲೆಗಳ ಕೂಡ್ಲಿಗಿ ಮತ್ತು ಜಗಳೂರು ತಾಲ್ಲೂಕುಗಳ ವಿವಿಧ ಗ್ರಾಮಗಳಲ್ಲಿ 15.20 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಹಂಚಿಕೆಗೆ ಸಂಬಂಧಿಸಿದಂತೆ ಹಂಚಿಕೆ ಸಮಿತಿ ಸಭೆಯಲ್ಲಿ ಘಟನೋತ್ತರ ಅನುಮೋದನೆ ಪಡೆಯುವ ಷರತ್ತಿಗೊಳಪಟ್ಟು ಹಂಚಿಕೆ ಆದೇಶ ನೀಡಬಹುದೆಂದು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ : ಇಎನ್ 132 ಎನ್‌ಸಿಇ 2017,**

**ಬೆಂಗಳೂರು, ದಿನಾಂಕ : 03.04.2017.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು, M/s Lalpur Wind Energy Private Limited ಕಂಪನಿಗೆ ಬಳ್ಳಾರಿ ಮತ್ತು ದಾವಣಗೆರೆ ಜಿಲ್ಲೆಗಳ ಕೂಡ್ಲಿಗಿ ಮತ್ತು ಜಗಳೂರು ತಾಲ್ಲೂಕುಗಳ ಶೆಡ್ಯೂಲ್‌ನಲ್ಲಿ ನಮೂದಿಸಿರುವ ವಿವಿಧ ಗ್ರಾಮಗಳಲ್ಲಿ ಹಾಗೂ ಭೌಗೋಳಿಕವಾಗಿ ನಮೂದಿಸಿರುವ ಅಕ್ಷಾಂಶ ಮತ್ತು ರೇಖಾಂಶಗಳಂತೆ ನಿಗಧಿಪಡಿಸಿದ ಪ್ರದೇಶಗಳಲ್ಲಿ 15.20 ಮೆ.ವ್ಯಾಟ್ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು ಹಂಚಿಕೆ ಮಾಡಿ ಆದೇಶಿಸಲಾಗಿದೆ.

---2)

1761
12-04-2017

Schedule

Geographical area description for 15.20 MW capacity wind power project

| Sl.No | Topo sheet No. | Proposed capacity in MW | Near by villages of the proposed area and district | Geographical area description of the project |
|---|---|---|---|---|
| 1 | 57 B/6 | 15.20 MW<br><br>(19 Nos x 0.800 MW) | Nimbalgeri, Bellikatte, Hirekumbalakunte, Harakbhavi, M.B.Ayyannahalli, Gudekote, Hosahalli, and Hanumavvanagathihalli Villages of Kudligi & Jagalur Taluks of Ballary and Davanagere Districts. | The proposed area to the firm was earlier allotted to M/s Vish Wind Infrastructure LLP for 300 MW. But the firm has transferred 81.60 MW to different firms and balance 218.40 MW is already proposed to Government for cancellation as the firm did not pay the time extension fee for extension of validity period beyond 6 years. This proposal is subject to condition that the 19 WTG's has to be commissioned in the latitude and longitude mentioned below. |
| | **Total** | **15.20 MW** | | |

**Land details for development of 15.20 MW capacity Wind Power Project of M/s Lalpur Wind Energy Private Limited**

| SL. No | Survey No. | Location No. | Latitude | Longitude | Alloted Land area (Acres) | Village | Taluk | District |
|---|---|---|---|---|---|---|---|---|
| 1 | 740 | 334A | 14°39'44.25"N | 76°23'1.43"E | 1-10 | Nimbalgeri | Kudligi | Bellary |
| 2 | 179 | 370E | 14°41'34.35"N | 76°25'24.27"E | 1-10 | Bellikatte | Kudligi | Bellary |
| 3 | 400/1 | 336B | 14°39'28.47"N | 76°22'55.31"E | 1-10 | Hirekumbalakunte | Kudligi | Bellary |
| 4 | 428 | 340A | 14°38'53.38"N | 76°23'8.16"E | 1 | Hirekumbalakatte | Kudligi | Bellary |
| 5 | 73 | 374B | 14°42'24.98"N | 76°24'41.57"E | 1-25 | Bellikatte | Kudligi | Bellary |
| 6 | 325/A | 536A | 14°40'58.85"N | 76°26'16.55"E | 1-10 | Bellikatte | Kudligi | Bellary |
| 7 | 49 | 564A | 14°41'30.61"N | 76°24'42.19"E | 1 | Bellikatte | Kudligi | Bellary |
| 8 | 239/B | 1166A | 14°43'14.72"N | 76°24'39.51"E | 0-80 | Harakbhavi | Kudligi | Bellary |
| | 242/A/2B | | | | 1 | Harakbhavi | | |
| 9 | 417/B | 1680 | 14°42'40.07"N | 76°24'54.74"E | 1-02 | Harakbhavi | Kudligi | Bellary |
| 10 | 125/B | 1901 | 14°43'40.91"N | 76°25'53.77"E | 0-75 | Harakbhavi | Kudligi | Bellary |
| 11 | 57/B | 2005D | 14°44'0.97"N | 76°26'55.26"E | 1-05 | M.B.Ayyannahalli & Gudekote | Kudligi | Bellary |
| 12 | 278/A | 2229D | 14°40'43.43"N | 76°27'14.28"E | 0-65 | Hosahalli | Kudligi | Bellary |
| | 278/B | | | | 0-75 | | | |
| 13 | 214 | 2230C | 14°40'52.60"N | 76°27'4.05"E | 1-40 | Hosahalli | Kudligi | Bellary |
| 14 | 60/A | 2412 | 14°44'7.07"N | 76°26'41.79"E | 1-15 | Harakabhavi | Kudligi | Bellary |

| | | | | | | | | |
|---|---|---|---|---|---|---|---|---|
| 15 | 399 | 337A | 14°39'19.67"N | 76°22'57.36"E | 1.12 | Hirekumbalakunte | Kudalgi | Bellary |
| 16 | 453/A | 343G | 14°38'52.98"N | 76°23'30.18"E | 1.30 | Hirekumbalakunte | Kudalgi | Bellary |
| 17 | 127/1 | 1105 | 14°43'43.11"N | 76°25'29.81"E | 0.50 | Harakabavi | Kudalgi | Bellary |
| | 128/F/1 | | | | 0.55 | Harakabavi | Kudalgi | Bellary |
| 18 | 32/1P7 | 341 B | 14°38'43.05"N | 76°23'21.43"E | 1.5 | Hanumavvanagathihalli | Jagalur | Davanagere |
| 19 | 32/1P1 | 342A | 14°38'41.84"N | 76°23'04.71"E | 1.5 | Hanumavvanagathihalli | Jagalur | Davanagere |

**ಷರತ್ತುಗಳು:-**

1. ಈ ಆದೇಶ ಹೊರಡಿಸಿದ ದಿನಾಂಕದಿಂದ 45 ದಿನಗಳ ಒಳಗಾಗಿ ಸರ್ಕಾರದ ಆದೇಶ ಸಂಖ್ಯೆ : ಇಎನ್ 435 ಎನ್‌ಸಿಇ 2011, ದಿನಾಂಕ :06.1.2012 ರನ್ವಯ ಅಭಿವೃದ್ಧಿದಾರರು ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.
2. ಅಭಿವೃದ್ಧಿದಾರರು ಈ ಯೋಜನೆಯನ್ನು ಸರ್ಕಾರದ ಆದೇಶ ಸಂಖ್ಯೆ: ಇಎನ್ 354 ಎನ್‌ಸಿಇ 2008 ದಿನಾಂಕ:19.01.2010 ಹಾಗೂ ತಿದ್ದುಪಡಿ ಆದೇಶ ಸಂಖ್ಯೆ: ಇಎನ್ 07 ಎನ್‌ಸಿಇ 2011 ದಿನಾಂಕ: 18.07.2011 ರಲ್ಲಿ ನಿಗದಿಪಡಿರುವ ಅವಧಿಯೊಳಗಾಗಿ ಅನುಷ್ಠಾನಗೊಳಿಸತಕ್ಕದ್ದು.
3. ಅಭಿವೃದ್ಧಿದಾರರು ತಾಂತ್ರಿಕ ಅವಶ್ಯಕತೆ ಮತ್ತು ಹೆಚ್ಚಿನ ವಿದ್ಯುತ್ ಉತ್ಪಾದನೆಯನ್ನು ಸೇಫ್‌ನಕ್ಷೆ ಮತ್ತು ವಿಂಡ್ ಫಾರ್ಮನ ಲೇಔಟ್‌ನ ಬದಲಾವಣೆಗನುಗುಣವಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದ ಶಿಫಾರಸ್ಸಿನಂತೆ ಇದೆ ಎಂಬುದನ್ನು ಖಾತರಿ ಪಡಿಸಬೇಕು.
4. ಯೋಜನೆಯ ವಿವಿಧ ಹಂತದ ಚಟುವಟಿಕೆಗಳು ಹಾಗೂ ಯೋಜನೆಗಳಿಂದ ಪ್ರಾರಂಭದ ಹಂತದ ತನಕ ವಿವಿಧ ಮೈಲುಗಲ್ಲುಗಳನ್ನು ತೋರಿಸುವ ಪರ್ಟ್ ನಕ್ಷೆಯನ್ನು ತಯಾರಿಸಿ ಮೇಲುಸ್ತುವಾರಿಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಲ್ಲಿಸಬೇಕು.
5. ಎಲ್ಲೆಲ್ಲಿ ಶಾಸನಬದ್ಧ ಅನುಮೋದನೆ ಅವಶ್ಯಕತೆಯಿದೆಯೋ ಅಂದರೆ ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ / ಕಂದಾಯ ಇಲಾಖೆಗಳ ಮತ್ತು ಇತರ ಸಂಬಂಧಿತ ಇಲಾಖೆಗಳಿಂದ ಅನುಮೋದನೆಯನ್ನು ಹಂಚಿಕೆದಾರರು ಪಡೆದುಕೊಳ್ಳತಕ್ಕದ್ದು. ಅಭಿವೃದ್ಧಿದಾರರು ಈ ಯೋಜನೆಯನ್ನು ಖಾಸಗಿ ಜಮೀನಿನಲ್ಲಿ ಕೈಗೊಳ್ಳುತ್ತಿರುವುದರಿಂದ, ಖಾಸಗಿ ಜಮೀನಿನ ಮಾಲೀಕರಿಂದ ಒಪ್ಪಿಗೆ ಪತ್ರವನ್ನು ಪಡೆಯತಕ್ಕದ್ದು.
6. ಅಭಿವೃದ್ಧಿದಾರರು ಈ ಯೋಜನೆಯಿಂದ ಉತ್ಪಾದಿಸುವ ವಿದ್ಯುತ್ತನ್ನು ಮಾರಾಟ ಮಾಡುವ ಕುರಿತು ಯೋಜನಾ ಅನುಷ್ಠಾನ ಪ್ರದೇಶದಲ್ಲಿನ ಸಂಬಂಧಪಟ್ಟ ವಿದ್ಯುತ್ ಸರಬರಾಜು ಕಂಪನಿಯೊಂದಿಗೆಯೇ ವಿದ್ಯುತ್ ಖರೀದಿ ಒಡಂಬಡಿಕೆಯನ್ನು ಮಾಡಿಕೊಳ್ಳಲು / ಕೆ.ಪಿ.ಟಿ.ಸಿ.ಎಲ್.ನೊಂದಿಗೆ ವೀಲಿಂಗ್ ಆಂಡ್ ಬ್ಯಾಂಕಿಂಗ್ ಒಡಂಬಡಿಕೆಯನ್ನು ಮಾಡಿಕೊಳ್ಳಲು / ಸ್ವಂತ ಬಳಕೆ ಮಾಡಿಕೊಳ್ಳಲು / ಮೂರನೇ ವ್ಯಕ್ತಿಗೆ ಮಾರಾಟ ಮಾಡಲು ಕೂಡ ಅನುಮತಿಸಲಾಗಿದೆ.
7. ಯೋಜನೆಯನ್ನು ತ್ವರಿತವಾಗಿ ಅನುಷ್ಠಾನ ಮಾಡಲು ಅನುವಾಗುವಂತೆ ರಾಜ್ಯ ಮತ್ತು ಜಿಲ್ಲಾ ಮಟ್ಟದ ಸರ್ಕಾರಿ ಅಧಿಕಾರಿಗಳು ಸಹಕರಿಸುವುದು.
8. ಸದರಿ ಪವನ ವಿದ್ಯುತ್ ಯೋಜನೆಗಾಗಿ ಇಂಧನ ಇಲಾಖೆಯಿಂದ ಜಮೀನನ್ನು ಹಂಚಿಕೆ ಮಾಡಲಾಗುವುದಿಲ್ಲ ಹಾಗೂ ಈ ಹಂಚಿಕೆ ಆದೇಶವು ಪವನ ವಿದ್ಯುತ್ ಯೋಜನೆಯ ಸಾಮರ್ಥ್ಯದ ಹಂಚಿಕೆಗೆ ಮಾತ್ರ ಸೀಮಿತವಾಗಿದೆ ಹಾಗೂ ಅಭಿವೃದ್ಧಿದಾರರಿಗೆ ಯೋಜನೆಯ ಜಾಗದಲ್ಲಿಯ ಖನಿಜ ಸಂಪತ್ತು ಹಾಗೂ ಭೂಮಿಯ ಬಗ್ಗೆ ಯಾವುದೇ ಹಕ್ಕು ಇರುವುದಿಲ್ಲ ಎಂಬುದನ್ನು ಮನಗಾಣತಕ್ಕದ್ದು.
9. ಸದರಿ ಕಂಪನಿಯವರು ಯೋಜನೆಗೆ ಸಂಬಂಧಿಸಿದಂತೆ ಬಾಕಿ ಇರುವ ಡಿಪಿಆರ್ ಮೊತ್ತ ಹಾಗೂ ಇನ್ನಿತರೆ ಶುಲ್ಕಗಳನ್ನು ಒಡಂಬಡಿಕೆ ಮಾಡಿಕೊಳ್ಳುವ ಮುನ್ನ ಕೆ.ಆರ್.ಇ.ಡಿ.ಎಲ್.ಗೆ ಸಂದಾಯ ಮಾಡತಕ್ಕದ್ದು.

....4

10. ಕರ್ನಾಟಕ ಭೂಸುಧಾರಣಾ ಕಾಯ್ದೆ 1961 ಕಲಂ 109 ರಡಿ ಕಂದಾಯ ಇಲಾಖೆಯಿಂದ ಅನುಮತಿ ಪಡೆದುಕೊಂಡು ಭೂಪರಿವರ್ತನೆಯಾದ ನಂತರವೇ ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕಾಗಿ ಬಳಕೆ ಮಾಡಿಕೊಳ್ಳತಕ್ಕದ್ದು.
11. ಈ ಯೋಜನೆಗೆ ಸರ್ಕಾರದ ಕೈಗಾರಿಕ ನೀತಿ 2014-19 ರನ್ವಯ ಅನ್ವಯಿಸುವ ಸವಲತ್ತುಗಳು ಲಭ್ಯವಾಗುತ್ತವೆ.

ಸದರಿ ಆದೇಶವನ್ನು ರದ್ದುಪಡಿಸುವ / ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ವಿ.ಶ್ರೀನಿವಾಸಯ್ಯ),
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

**ಇವರಿಗೆ:**

ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ, ಬೆಂಗಳೂರು, ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಣೆಗಾಗಿ.

**ಪ್ರತಿ:**

1 ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ) ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪಟ್ಟಿಗೆ ಸಂಖ್ಯೆ: 5398, ಬೆಂಗಳೂರು 560001.
2 ಪ್ರಧಾನ ಮಹಾಲೇಖಪಾಲರು (ಇ & ಎಸ್ ಎಸ್ ಎ) ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪಟ್ಟಿಗೆ ಸಂಖ್ಯೆ: 5398, ಬೆಂಗಳೂರು – 560001
3 ಪ್ರಧಾನ ಮಹಾಲೇಖಪಾಲರು (ಎ & ಇ) ರವರ ಕಾರ್ಯದರ್ಶಿ, ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪಟ್ಟಿಗೆ ಸಂಖ್ಯೆ: 5329, ಬೆಂಗಳೂರು – 560001.
4 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
5 ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
6 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯಪಡೆ ಮುಖ್ಯಸ್ಥರು), ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.
7 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ,ಬೆಂಗಳೂರು-9.
8 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ,ಬೆಂಗಳೂರು-1.
9 ವ್ಯವಸ್ಥಾಪಕ ನಿರ್ದೇಶಕರು, ಗುಲ್ಬರ್ಗಾ ವಿದ್ಯುತ್ ಸರಬರಾಜು ಕಂಪನಿ, ಕಲಬುರಗಿ.
10 ವ್ಯವಸ್ಥಾಪಕ ನಿರ್ದೇಶಕರು, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ, ಬೆಂಗಳೂರು.
11 ಜಿಲ್ಲಾಧಿಕಾರಿ, ಬಳ್ಳಾರಿ ಜಿಲ್ಲೆ / ದಾವಣಗೆರೆ ಜಿಲ್ಲೆ, ಬಳ್ಳಾರಿ / ದಾವಣಗೆರೆ.
12 ಉಪ ಅರಣ್ಯ ಸಂರಕ್ಷಣಾಧಿಕಾರಿ, ಬಳ್ಳಾರಿ / ದಾವಣಗೆರೆ ಪ್ರಾದೇಶಿಕ ವಿಭಾಗ, ಬಳ್ಳಾರಿ / ದಾವಣಗೆರೆ..
13 ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
14 M/s Lalpur Wind Energy Private Limited, The IL&FS Financial Centre, No C-22, G-Block, Bandra Kurla Complex, Bandra (East) Mumbai-400051.
15 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.
16 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.
17 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.